# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1117 (120)
ಸದಸ್ಯರ ಹೆಸರು : ಶ್ರೀ. ತಿಪ್ಪಣ್ಣಪ್ಪ ಕಮಕನೂರ (ವಿಧಾನ ಸಭಾ ಕ್ಷೇತ್ರ)
ಉತ್ತರಿಸುವ ದಿನಾಂಕ : 12.03.2026
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಕೃಷ್ಣಾ ಮೇಲ್ದಂಡೆ ಯೋಜನೆ, ಸಿಂಗಟಾಲೂರು, ಎತ್ತಿನಹೊಳೆ ಯೋಜನೆ ಸೇರಿದಂತೆ ಪ್ರಮುಖ ನೀರಾವರಿ ಮತ್ತು ಹೆದ್ದಾರಿ ಯೋಜನೆಗಳಿಗೆ ಸಂಬಂಧಿಸಿದ 530 ಭೂಸ್ವಾಧೀನ ಪ್ರಕರಣಗಳಲ್ಲಿ ಸುಪ್ರೀಂ ಕೋರ್ಟ್ ರಾಜ್ಯ ಸರ್ಕಾರದ ಪರವಾಗಿ ಐತಿಹಾಸಿಕ ತೀರ್ಪು ನೀಡಿರುವುದು ನಿಜವೇ; | ಹೌದು. |
| (ಆ) | ಈ ತೀರ್ಪಿನಿಂದಾಗಿ ಸರ್ಕಾರದ ಬೊಕ್ಕಸಕ್ಕೆ ಅಂದಾಜು 10 ಸಾವಿರ ಕೋಟಿ ರೂಪಾಯಿಗಳಷ್ಟು ಹಣ ಉಳಿತಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಭೂಸ್ವಾಧೀನ ಕಾಯ್ದೆ 2013ರ ಕಲಂ 74ರಡಿ ಮಾನ್ಯ ಜಿಲ್ಲಾ ನ್ಯಾಯಾಲಯಗಳ ಆದೇಶದ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿಯನ್ನು ದಾಖಲಿಸಬೇಕಾದಲ್ಲಿ ನಿಗದಿತ ಕಾಲಮಿತಿ 120 ದಿನಗಳ ಒಳಗಾಗಿ ಅಪೀಲು ದಾಖಲಿಸಬೇಕಾಗಿರುತ್ತದೆ.<br>ಮಾನ್ಯ ಉಚ್ಚ ನ್ಯಾಯಾಲಯ, ಧಾರವಾಡ ಪೀಠದಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆ, ಸಿಂಗಟಾಲೂರು ಯೋಜನೆ ಸೇರಿದಂತೆ ಪ್ರಮುಖ ನೀರಾವರಿ ಯೋಜನೆಗಳು ಹಾಗೂ ನಗರಾಭಿವೃದ್ಧಿ, ಲೋಕೋಪಯೋಗಿ, ಸಣ್ಣ ನೀರಾವರಿ ಇಲಾಖೆಗಳ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ 120 ದಿನಗಳ ನಂತರ ದಾಖಲಾದ MFA No.102543/2022 c/w other matters (ಸುಮಾರು 981 ಮೇಲ್ಮನವಿಗಳು) ಗಳನ್ನು ಮಾನ್ಯ ಉಚ್ಚ ನ್ಯಾಯಾಲಯ, ಧಾರವಾಡ ಪೀಠವು ವಿಳಂಬದ ಆಧಾರದ ಮೇಲೆ ದಿನಾಂಕ:23.09.2024ರಂದು ವಜಾಗೊಳಿಸಿ ಆದೇಶಿಸಿರುತ್ತದೆ.<br>ಸದರಿ ಆದೇಶದ ವಿರುದ್ಧ ಜಲ ಸಂಪನ್ಮೂಲ ಇಲಾಖೆಯ ಕೃಷ್ಣಾ ಭಾಗ್ಯ ಜಲ ನಿಗಮ ಮತ್ತು ಕರ್ನಾಟಕ ನೀರಾವರಿ ನಿಗಮಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ Special Leave Petitionಗಳನ್ನು ದಾಖಲಿಸಿರುತ್ತದೆ.<br>ಮಾನ್ಯ ಸರ್ವೋಚ್ಚ ನ್ಯಾಯಾಲಯವು SLP 215-216/2023 (The Deputy Commissioner and Special Land |
| (ಇ) | ಈ ಪ್ರಕರಣಗಳಲ್ಲಿ ಹೈಕೋರ್ಟ್ ನೀಡಿದ್ದ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು ವಿಳಂಬವಾಗಿದ್ದರೂ, ಸಾರ್ವಜನಿಕ ಹಿತದೃಷ್ಟಿಯಿಂದ ಸುಪ್ರೀಂ ಕೋರ್ಟ್ ಇದನ್ನು ಪುರಸ್ಕರಿಸಲು ಕಾರಣಗಳೇನು; | |
| (ಈ) | ಈ ತೀರ್ಪಿನಿಂದಾಗಿ ಬಾಕಿ ಉಳಿದಿರುವ ಪ್ರಮುಖ ಮೂಲಸೌಕರ್ಯ ಯೋಜನೆಗಳ ಅನುಷ್ಠಾನಕ್ಕೆ ವೇಗ ಸಿಗಲಿದೆಯೇ? | |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| | | Acquisition Officer vs M/s Global Milll Limited) ಪ್ರಕರಣದೊಂದಿಗೆ ಜಲ ಸಂಪನ್ಮೂಲ ಇಲಾಖೆಯ 2 ನಿಗಮಗಳು ಹೂಡಿರುವ ದಾವೆಗಳು ಮತ್ತು ಇದೇ ರೀತಿಯ ಇತರೆ ರಾಜ್ಯಗಳಿಗೆ ಸಂಬಂಧಿಸಿದ ಒಟ್ಟು 530 ಪ್ರಕರಣಗಳ ವಿಚಾರಣೆ ನಡೆಸಿ ದಿನಾಂಕ:09.02.2026ರಂದು ಅಂತಿಮ ಆದೇಶ ನೀಡಿರುತ್ತದೆ.<br>ಸದರಿ ಆದೇಶದಲ್ಲಿ ಪ್ರಮುಖವಾಗಿ **Section 74 of** the 2013 Act does not bar the **application of** Section 5 of the 1963 Act ಎಂದು ತಿಳಿಸಿದ್ದು, ಭೂಸ್ವಾಧೀನ ಕಾಯ್ದೆ 2013ರ ಕಲಂ 74ರಡಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ್ದ ಎಲ್ಲಾ ಪ್ರಕರಣಗಳ delay condonationನೊಂದಿಗೆ merit ಆಧಾರದಲ್ಲಿ ಸದರಿ ಪ್ರಕರಣಗಳಲ್ಲಿ ವಾದ ಮಂಡಿಸಿ, ಆದೇಶ ಪಡೆಯಲು ಅವಕಾಶ ಮಾಡಿರುತ್ತದೆ.<br>ಇದರಿಂದಾಗಿ ಪ್ರಮುಖ ನೀರಾವರಿ ಯೋಜನೆಗಳ ಭೂಸ್ವಾಧೀನ ಪ್ರಕರಣಗಳಲ್ಲಿ ಜಿಲ್ಲಾ ನ್ಯಾಯಾಲಯಗಳು ಹೆಚ್ಚುವರಿ ಪರಿಹಾರ ನೀಡಿ ಹೊರಡಿಸಿರುವ ಆದೇಶದ ಹಿನ್ನೆಲೆಯಲ್ಲಿ ಉಂಟಾಗಬಹುದಾಗಿದ್ದ ಆರ್ಥಿಕ ಹೊರೆಯನ್ನು ತಡೆಯಬಹುದಾಗಿದ್ದು, ಯೋಜನೆಗಳ ತೀವ್ರ ಅನುಷ್ಠಾನಕ್ಕೆ ಸಹಕಾರಿಯಾಗಲಿದೆ. |

ಸಂಖ್ಯೆ: ಜಸಂಇ 11 ಡಬ್ಲ್ಯೂಬಿಎಂ 2026

**(ಡಿ.ಕೆ. ಶಿವಕುಮಾರ್)**
**ಉಪ ಮುಖ್ಯಮಂತ್ರಿಗಳು**